ವೃತ್ತಿಪರ ಶಿಕ್ಷಣದ ಬಗ್ಗೆ

1553 - ಶ್ರೀ ಜಿ. ರಾಜೂಗೌಡ (ಹನೂರು) : ಮಾನ್ಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಪಿ.ಯು.ಸಿ. ಪಠ್ಯ ಕ್ರಮಗಳಲ್ಲಿ ವೃತ್ತಿಪರ ವಿಷಯಗಳನ್ನು ಸೇರಿಸಲು ಸರ್ಕಾರ ಏನಾದರೂ ಕ್ರಮ ಕೈಗೊಂಡಿದೆಯೇ?*

ಆ) *ಹಾಗಿದ್ದಲ್ಲಿ ಅದನ್ನು ಯಾವಾಗ ಜಾರಿಗೆ ತರಲಾಗುವುದು?*

ಇ) *ಇದರಿಂದ ವಿದ್ಯಾರ್ಥಿ ಸಮುದಾಯದಲ್ಲಾಗುವ ಬದಲಾವಣೆಗಳೇನು?*

ಶ್ರೀ ಎಂ ವೀರಪ್ಪ ಮೊಯಿಲಿ (ಶಿಕ್ಷಣ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಕೊಲ್ಲಿ ಶುಲ್ಕದ ಬಗ್ಗೆ

1543 - ಶ್ರೀ ಜಿ.ರಾಜು ಗೌಡ (ಹನೂರು) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯ ಸರ್ಕಾರವು ರಾಜ್ಯ ರಸ್ತೆ ಸಾರಿಗೆ ಬಸ್ಸುಗಳಲ್ಲಿ ಪ್ರಯಾಣ ದರಕ್ಕೆ ಕೊಲ್ಲಿ ಶುಲ್ಕವನ್ನು ಸೇರಿಸಬೇಕೆಂಬ ಉದ್ದೇಶ ಇದೆಯಾ?*

ಆ) *ಹಾಗಿದ್ದಲ್ಲಿ ಕೊಲ್ಲಿ ಶುಲ್ಕದ ರೂಪದಲ್ಲಿ ಎಷ್ಟು ಆರ್ಥಿಕ ಆದಾಯವನ್ನು ನಿರೀಕ್ಷಿಸಲಾಗಿದೆ?*

ಶ್ರೀ ಅಜೀಜ್ ಸೇಠ್ (ಸಾರಿಗೆ ಸಚಿವರು) :

ಅ) ಇನ್ನು ತೀರ್ಮಾನವಾಗಿಲ್ಲ.

ಆ) ಹೆಚ್ಚುವರಿ ಆದಾಯವು ಅಂತಿಮ ತೀರ್ಮಾನದ ಮೇಲೆ ಅವಲಂಬಿತವಾಗಿದೆ.

ಕುಣಿಗಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿಜ್ಞಾನ ವಿಭಾಗ ಮಂಜೂರಾತಿ

1515 - ಶ್ರೀ ಕೆ. ಲಕ್ಕಪ್ಪ (ಕುಣಿಗಲ್) : ಮಾನ್ಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಕುಣಿಗಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿಜ್ಞಾನ ವಿಭಾಗವು ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಕಾಲೇಜಿನ ಕಟ್ಟಡವು ಪೂರ್ಣಗೊಳ್ಳದೇ ಇರುವುದರಿಂದ ವಿಜ್ಞಾನ ವಿಭಾಗವನ್ನು ಪ್ರಾರಂಭಿಸದೇ ಇರುವುದು ನಿಜವೇ?*

ಇ) *ಸರ್ಕಾರವು ಕಟ್ಟಡ ನಿರ್ಮಾಣವನ್ನು ಪೂರ್ಣಗೊಳಿಸಿ 1991-92ನೇ ಶೈಕ್ಷಣಿಕ ವರ್ಷದಿಂದ ವಿಜ್ಞಾನ ವಿಭಾಗವನ್ನು ಪ್ರಾರಂಭಿಸಲು ತಕ್ಷಣ ಕ್ರಮ ಕೈಗೊಳ್ಳುವುದೇ?*

ಶ್ರೀ ಎಂ.ವೀರಪ್ಪ ಮೊಯಿಲಿ (ಶಿಕ್ಷಣ ಸಚಿವರು):

ಅ) ಬಂದಿದೆ.

ಆ) ನಿಜ.

ಇ) 1990-91 ನೇ ಸಾಲಿನಲ್ಲಿ ಆರ್ಥಿಕ ಕೊರತೆಯಿಂದಾಗಿ ಈ ಕಾಲೇಜಿನ ಮೊದಲ ಅಂತಸ್ತಿನ ಕಟ್ಟಡವನ್ನು ಕಟ್ಟುವ ಪ್ರಸ್ತಾವನೆಯನ್ನು ಪರಿಗಣಿಸಲು ಸಾಧ್ಯವಾಗಲಿಲ್ಲ.